ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 215 ಜಿಪಸ 2018(ಪಿ-3)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು,ದಿನಾಂಕ:01-01-2020

## ಸುತ್ತೋಲೆ

**ವಿಷಯ:** ಹೊಸದಾಗಿ ರಚಿಸಲಾಗಿರುವ ತಾಲ್ಲೂಕು ಪಂಚಾಯತಿಗಳನ್ನು ಕಾರ್ಯಾಚರಣೆಗೊಳಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 215 ಜಿಪಸ 2018 (1 ರಿಂದ 50), ದಿನಾಂಕ:14-10-2019.

*****

ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಸರ್ಕಾರವು 50 ಹೊಸ ತಾಲ್ಲೂಕು ಪಂಚಾಯತಿಗಳನ್ನು ವಿವಿಧ ಜಿಲ್ಲೆಗಳಲ್ಲಿ ರಚಿಸಿ, ಅಧಿಸೂಚನೆ ಹೊರಡಿಸಿರುತ್ತದೆ. ದಿನಾಂಕ:31-12-2019ರಂದು ಸಂಬಂಧಪಟ್ಟ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯನ್ನು ನಡೆಸಿ, ಸದರಿ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಹಣೆಯ ಬಗ್ಗೆ ಪರಿಶೀಲನೆ ನಡೆಸಲಾಯಿತು. ಈ ತಾಲ್ಲೂಕು ಪಂಚಾಯತಿಗಳು ಇದುವರೆವಿಗೂ ಕಾರ್ಯನಿರ್ವಹಿಸದೇ ಇರುವುದು ವಿಷಾದನೀಯ ಸಂಗತಿಯಾಗಿದೆ. ಈ ಬಗ್ಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೈಯಕ್ತಿಕ ಗಮನವನ್ನು ಹರಿಸಿ, ತಾಲ್ಲೂಕು ಪಂಚಾಯತಿಗಳು ಸ್ವಾಯತ್ತ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಲು ಅಗತ್ಯಕ್ರಮ ಕೈಗೊಳ್ಳಲು ಸೂಚಿಸಿದೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಸಂಸ್ಥೆಗಳು ಚಾಲ್ತಿಗೆ ಬರುವಂತೆ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

1. ಹೊಸದಾಗಿ ರಚನೆಗೊಂಡ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಯ ಹುದ್ದೆಗೆ ಸಮಾನಾಂತರ ಹುದ್ದೆಗಳನ್ನು ಹೊಂದಿರುವಂತಹ ಅಧಿಕಾರಿಯನ್ನು ಹೆಚ್ಚುವರಿ ಪ್ರಭಾರದಲ್ಲಿ ಇಡತಕ್ಕದ್ದು.
2. ಉಳಿದಂತೆ ಸಹಾಯಕ ನಿರ್ದೇಶಕರು ಮತ್ತು ಇತರೆ ಅನುಮೋದಿತ ಸಿಬ್ಬಂದಿಗಳ ಹುದ್ದೆಗಳಿಗೆ ಮೂಲ ತಾಲ್ಲೂಕು ಪಂಚಾಯತಿಯಲ್ಲಿರುವಂತಹ ಅಧಿಕಾರಿ/ಸಿಬ್ಬಂದಿಗಳನ್ನು ಅಥವಾ ಹೊಸದಾಗಿ ರಚನೆಗೊಂಡಿರುವಂತಹ ತಾಲ್ಲೂಕು ಪಂಚಾಯತಿಯ ಕೇಂದ್ರ ಸ್ಥಾನದಲ್ಲಿ ಇರುವಂತಹ ಜಿಲ್ಲಾ ಪಂಚಾಯತಿಯ ಅಧೀನ ಕಛೇರಿಯ ಸಮಾನಾಂತರ ಅಧಿಕಾರಿ/ಸಿಬ್ಬಂದಿಗಳನ್ನು ಹೆಚ್ಚುವರಿ ಪ್ರಭಾರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ನೇಮಿಸಿ ಆದೇಶ ಹೊರಡಿಸತಕ್ಕದ್ದು.
3. ಹೊಸ ತಾಲ್ಲೂಕು ಪಂಚಾಯತಿ ಕೇಂದ್ರ ಸ್ಥಾನವು ಒಂದು ವೇಳೆ ಗ್ರಾಮ ಪಂಚಾಯತಿಯಾಗಿದ್ದರೆ, ಆ ಕೇಂದ್ರ ಸ್ಥಾನದ ಗ್ರಾಮ ಪಂಚಾಯತಿ ಕಟ್ಟಡದಲ್ಲಿ ಕೂಡಲೇ ತಾಲ್ಲೂಕು ಪಂಚಾಯತಿಯ ಕಛೇರಿಯನ್ನು ತೆರೆಯತಕ್ಕದ್ದು. ಒಂದು ವೇಳೆ ಪಟ್ಟಣ ಪ್ರದೇಶವಾಗಿದ್ದರೆ ಮೊದಲನೆಯ ಆದ್ಯತೆಯಾಗಿ ಇತರೆ ಸರ್ಕಾರಿ ಕಛೇರಿಗಳಲ್ಲಿ ಸ್ಥಳ ಲಭ್ಯವಿದ್ದರೆ ಅಂತಹ ಕಛೇರಿಗಳನ್ನು ಗುರುತಿಸುವುದು. ಇಲ್ಲದಿದ್ದರೆ ಸೌಲಭ್ಯಗಳನ್ನು ಹೊಂದಿರುವಂತಹ ಬಾಡಿಗೆ ಕಟ್ಟಡವನ್ನು ಗುರುತಿಸಿ, ತಾಲ್ಲೂಕು ಪಂಚಾಯತಿ ಕಛೇರಿಯನ್ನು ತೆರೆಯತಕ್ಕದ್ದು.
4. ಹೊಸದಾಗಿ ತಾಲ್ಲೂಕು ಪಂಚಾಯತಿ ಕಟ್ಟಡವನ್ನು ನಿರ್ಮಿಸಲು ಅಗತ್ಯವಾದಂತಹ ವಿಸ್ತೀರ್ಣದ ನಿವೇಶನವನ್ನು ಗುರುತಿಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ತಿಳಿಸಿದೆ.
5. ತಾತ್ಕಾಲಿಕವಾಗಿ ಕಛೇರಿ ತೆರೆಯಲು ಗುರುತಿಸಿರುವ ಸರ್ಕಾರಿ ಕಟ್ಟಡಗಳಿಗೆ ದುರಸ್ತಿ ಅಥವಾ ವಿಸ್ತೀರ್ಣಕ್ಕೆ ಮತ್ತು ಕಛೇರಿಗೆ ಅಗತ್ಯವಾದಂತಹ ಪೀಠೋಪಕರಣಗಳಿಗೆ ಬೇಕಾಗುವಂತಹ ಅನುದಾನದ ಸವಿಸ್ತಾರವಾದ ವಿವರಣೆಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು.
6. ಉಲ್ಲೇಖದ ಅಧಿಸೂಚನೆಯಲ್ಲಿ, ಮೂಲ ತಾಲ್ಲೂಕು ಪಂಚಾಯತಿಯಲ್ಲಿ ಉಳಿದಿರುವಂತಹ ಆವರ್ತಕ ಮತ್ತು ಅನಾವರ್ತಕ ಅನುದಾನವನ್ನು ಹೊಸ ತಾಲ್ಲೂಕು ಪಂಚಾಯತಿ ಮತ್ತು ಹಳೆ

ತಾಲ್ಲೂಕು ಪಂಚಾಯತಿಗಳ ನಡುವೆ ವಿಭಜಿಸಿ ನೀಡಲು ಈಗಾಗಲೇ ಸೂಚನೆ ನೀಡಲಾಗಿದೆ. ಆದರೂ, ಇದುವರೆವಿಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುದಾನವನ್ನು ವಿಭಜಿಸಿ ನೀಡಿರುವುದಿಲ್ಲ. ಆದ್ದರಿಂದ ಕೂಡಲೇ ಕ್ರಮ ಕೈಗೊಳ್ಳಲು ತಿಳಿಸಿದೆ.

7. ಹೊಸ ತಾಲ್ಲೂಕು ಪಂಚಾಯತಿಗಳಿಗೆ ನೇಮಿಸಿದ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಣ ಸೆಳೆಯುವ ಮತ್ತು ವಿತರಿಸುವ ಅಧಿಕಾರಿಯಾಗಿ (DDO Code) ಪಡೆಯಬೇಕಾಗುತ್ತದೆ. ಇದಕ್ಕಾಗಿ ಮುಖ್ಯ ಲೆಕ್ಕಾಧಿಕಾರಿಗಳು ಖಜಾನೆಗೆ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗಳಿಂದ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಯನ್ನಾಗಿ ನೇಮಿಸಿ, ಆದೇಶ ಹೊರಡಿಸಬೇಕಾಗುತ್ತದೆ.
8. ಸಂಬಂಧಿಸಿದ ಕಾರ್ಯನಿರ್ವಾಹಕ ಅಧಿಕಾರಿಗಳು HRMSನಲ್ಲಿ ನೊಂದಾವಣೆ ಮಾಡಿಕೊಳ್ಳಬೇಕಾಗುತ್ತದೆ ಮತ್ತು ಪಂಚತಂತ್ರದಲ್ಲಿ Login ಪಡೆಯಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಸಲ್ಲಿಸಲು ತಿಳಿಸಿದೆ.
9. ಕಾರ್ಯನಿರ್ವಾಹಕ ಅಧಿಕಾರಿಗಳು ಸಂಬಳ ಪಾವತಿಸುವ ಅಧಿಕಾರಿಯಾಗಿರುವುದರಿಂದ NPS ನೊಂದಣಿಯನ್ನು ಮಾಡಿಕೊಳ್ಳುವುದು. ಹಾಗೆಯೇ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಕಾಯ್ದೆಯಡಿಯಲ್ಲಿ ತಾಲ್ಲೂಕು ಸಮನ್ವಯಾಧಿಕಾರಿಯಾಗಿ ಕಾರ್ಯನಿರ್ವಹಿಸುವುದರಿಂದ ಅದಕ್ಕೆ ಅಗತ್ಯವಾದಂತಹ Login ಮತ್ತು Password ಗಳನ್ನು ಗ್ರಾಮೀಣಾಭಿವೃದ್ಧಿ ಆಯುಕ್ತರ ಕಛೇರಿಯಿಂದ ಪಡೆಯುವುದು.
10. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 302(ಎ)ನ್ನು ಪ್ರಕರಣ 133ರ ಜೊತೆ ಓದಿಕೊಂಡಂತೆ ಹೊಸ ಹಾಗೂ ಹಳೆಯ ತಾಲ್ಲೂಕು ಪಂಚಾಯತಿಗಳ ನಡುವೆ ಸದಸ್ಯರನ್ನು ವಿಭಜಿಸಿ ಅಧಿಸೂಚನೆ ಹೊರಡಿಸಲು ಪ್ರಾದೇಶಿಕ ಆಯುಕ್ತರ ಕಛೇರಿಯ ಜೊತೆ ಸಮನ್ವಯತೆಯನ್ನು ಸಾಧಿಸಿ ಕೂಡಲೇ ಅಧಿಸೂಚನೆ ಹೊರಡಿಸಲು ಕ್ರಮವಹಿಸುವುದು.
11. ಒಂದು ವೇಳೆ ಹಳೆಯ ತಾಲ್ಲೂಕು ಪಂಚಾಯತಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಧ್ಯಕ್ಷರು/ಉಪಾಧ್ಯಕ್ಷರ ಕ್ಷೇತ್ರಗಳು ಹೊಸ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಗೆ ಒಳಪಟ್ಟರೆ, ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಅವರ ಸ್ಥಾನವು ತೆರವುಗೊಳ್ಳುತ್ತದೆ.
12. 2020-21ನೇ ಸಾಲಿನ ಆಯವ್ಯಯದಲ್ಲಿ ಹೊಸ ತಾಲ್ಲೂಕು ಪಂಚಾಯತಿಯ ಅಧಿಕಾರಿಗಳ/ಸಿಬ್ಬಂದಿಗಳ ಮತ್ತು ಇತರೆ ವೆಚ್ಚಗಳಿಗೆ ಆಯವ್ಯಯವನ್ನು ಯೋಜನಾ ಇಲಾಖೆಯ ಜೊತೆ ಚರ್ಚಿಸಿ, ಲಿಂಕ್‌ಡಾಕ್ಯೂಮೆಂಟ್‌ನಲ್ಲಿ ಸೇರುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ವಹಿಸುವುದು.
13. ಹೊಸದಾಗಿ ರಚನೆಯಾಗಿರುವ ತಾಲ್ಲೂಕು ಪಂಚಾಯತಿಗಳಲ್ಲಿ ಮೇಲ್ಕಂಡ ಅಂಶಗಳನ್ನು ಅನುಸರಿಸಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿಯವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ, ಆದೇಶಿಸುವಂತೆ ಸೂಚಿಸಿದೆ.

ಮೇಲಿನ ವಿಷಯವು ಅತೀ ಪ್ರಮುಖವಾದ ವಿಷಯವಾಗಿರುವುದರಿಂದ ತುರ್ತಾಗಿ ಕ್ರಮ ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದೆ.

2.1.2020

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
4. ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
6. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.